**1 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.ನ್ಯಾಯಾಲಯ, ಮುಳಬಾಗಿಲು**

**ಸಿಸಿ. ನಂಬರ್ 19/2025**

ಫ್ರಾ.ಸಾಃ **7**

ಚಾಸಾಃ **15**

**ದಿನಾಂಕಃ06.08.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು**.

| | |
|---|---|
| ಹೆಸರು | : ಶ್ರೀ ಕೆ. ಜಿ. ಸತೀಶ್ |
| ತಂದೆಯ ಹೆಸರು | : ಲೇಟ್ ಹೆಚ್. ಗೋವಿಂದಪ್ಪ |
| ವಯಸ್ಸು | : 48 ವರ್ಷ |
| ಕೆಲಸ | : ಸಿಪಿಐ , ಮುಳಬಾಗಿಲು ಗ್ರಾಮಾಂತರ |
| ವಾಸ ಸ್ಥಳ | : ಮುಳಬಾಗಿಲು |

**ಮುಖ್ಯ ವಿಚಾರಣೆಃ ಮಾನ್ಯ ಸ. ಸ. ಅ. ರವರಿಂದಃ**

ಆಗಸ್ಟ್ 2023 ರಿಂದ ಇಲಿಯವರೆಗೆ ಮುಳಬಾಗಿಲಿನಲ್ಲಿ ವೃತ್ತ ನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿಃ 06.10.2023 ರಂದು ಚಾಸಾ 14 ರವರಿಂದ ಈ ಪ್ರಕರಣದ ಕಡತವನ್ನು ಪಡೆದು ಪರಿಶೀಲಿಸಿ ತನಿಖೆ ಮುಂದುವರೆಸಿರುತ್ತೇನೆ. ಅದೇ ದಿನ ಶವಾಗಾರಕ್ಕೆ ಬೇಟಿ ನೀಡಿ ಚಾಸಾ 5 ರಿಂದ 9 ರವರ ಸಮಕ್ಷಮ ಶವ ಪಂಚನಾಮೆ ಜರುಗಿಸಿರುತ್ತೇನೆ. ಚಾಸಾ 5 ರಿಂದ 9 ರವರ ಹೇಳಿಕೆಗಳನ್ನು ಪಡೆದಿರುತ್ತೇನೆ. ಸದರಿ ಶವ ಪಂಚನಾಮೆಯನ್ನು ಈಗಾಗಲೇ ನಿಪಿ 4 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ4(ಎ) ಎಂದು ಗುರುತಿಸಲಾಯಿತು.

ದಿಃ 07.10.2023 ರಂದು ಕೃತ್ಯ ನಡೆದ ಸ್ಥಳಕ್ಕೆ ಬೇಟಿ ನೀಡಿ ಪ್ರತ್ಯಕ್ಷ ಸಾಕ್ಷಿದಾರರಾದ ಚಾಸಾ 2 ರವರು ತೋರಿಸಿದ ಸ್ಥಳದಲ್ಲಿ ಚಾಸಾ 3 ಮತ್ತು 4 ರವರ ಸಮಕ್ಷಮ ಬೆಳಿಗ್ಗೆ 9.00 ರಿಂದ 10.00 ಗಂಟೆಯವರೆಗೆ ಮಹಜರ್ ಮಾಡಿ ಟ್ರಾಕ್ಟರ್, ಟ್ರಾಲಿ ಮತ್ತು ದ್ವಿಚಕ್ರ ವಾಹನವನ್ನು ಅಮಾನತ್ತುಪಡಿಸಿಕೊಂಡಿರುತ್ತೇನೆ. ಮಹಜರ್ ಸಮಯದಲ್ಲಿ ಕಚ್ಚಾ ನಕಾಶೆಯನ್ನು

ತಯಾರಿಸಿರುತ್ತೇನೆ. ಸದರಿ ಸ್ಥಳ ಪಂಚನಾಮೆಯನ್ನು ಈಗಾಗಲೇ ನಿಪಿ 2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ2(ಬಿ) ಎಂದು ಗುರುತಿಸಲಾಯಿತು. ಕಚ್ಚಾ ನಕಾಶೆಯನ್ನು ನಿಪಿ 11 ಎಂದು ಸಾಕ್ಷಿಯ ಸಹಿಯನ್ನು ನಿಪಿ11(ಎ) ಎಂದು ಗುರುತಿಸಲಾಯಿತು.

ಅದೇ ದಿನ ಚಾಸಾ 10 ರವರಿಗೆ ಕಲಂ 133 ಐಎಂವಿ ಅಡಿಯಲ್ಲಿ ನೋಟೀಸ್ ಅನ್ನು ನೀಡಿರುತ್ತೇನೆ. ಸದರಿ ನೋಟೀಸ್ ಅನ್ನು ಸಾಕ್ಷಿ ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ12 ಎಂದು ಸಾಕ್ಷಿಯ ಸಹಿಯನ್ನು ನಿಪಿ12(ಎ) ಎಂದು ಗುರುತಿಸಲಾಯಿತು. ಅದೇ ದಿನ ಚಾಸಾ 2 ಮತ್ತು 10 ರವರ ಹೇಳಿಕೆಗಳನ್ನು ದಾಖಲಿಸಿರುತ್ತೇನೆ. ಅದೇ ದಿನ ಚಾಸಾ 12 ರವರಿಗೆ ಎರಡೂ ವಾಹಗಳ ಬಗ್ಗೆ ತಪಾಸಣಾ ವರದಿ ನೀಡುವಂತೆ ಕೋರಿಕೆ ಸಲ್ಲಿಸಿರುತ್ತೇನೆ. ದಿಃ 09.10.2023 ರಂದು ಚಾಸಾ 10 ರವರಿಂದ ಚಾಲಕನ ವಿವರ ಮತ್ತು ಟ್ರಾಕ್ಟರ್ ನ ದಾಖಲೆಗಳನ್ನು ಪಡೆದಿರುತ್ತೇನೆ.

ಆರೋಪಿಯ ವಿರುದ್ಧ ದಸ್ತಗಿರಿ ಕ್ರಮ ಅನುಸರಿ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ. ಚಾಸಾ 10 ರವರಿಗೆ ವಾಹನ ತಪಾಸಣೆಯ ನಂತರ ಟ್ರಾಕ್ಟರ್ ಮತ್ತು ಟ್ರಾಲಿಯನ್ನು ಬಿಡುಗಡೆ ಮಾಡಿರುತ್ತೇನೆ. ಸದರಿ ವಾಹನಗಳಿಗೆ ಸಂಬಂಧಿಸಿದ ಭಾವಚಿತ್ರಗಳನ್ನು ತೆಗೆಸಿರುತ್ತೇನೆ. ಸದರಿ ಮುಚ್ಚಳಿಕೆಯನ್ನು ಈಗಾಗಲೇ ನಿಪಿ 7 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ7(ಎ) ಎಂದು ಗುರುತಿಸಲಾಯಿತು.

ಅದೇ ದಿನ ಮೃತರ ಪಿಎಂ ವರದಿ ಮತ್ತು ಐಎಂವಿ ವರದಿಯನ್ನು ಚಾಸಾ 11 ರವರಿಂದ ಪಡೆದಿರುತ್ತೇನೆ. ದಿಃ02.11.2023 ರಂದು ಚಾಸಾ 1 ರವರಿಂದ ಮುಚ್ಚಳಿಕೆ ಬರೆಸಿಕೊಂಡು ವಾಹನ ತಪಾಸಣೆ ಮಾಡಿದ ದ್ವಿಚಕ್ರ ವಾಹನವನ್ನು ಬಿಡುಗಡೆ ಮಾಡಿರುತ್ತೇನೆ. ತನಿಖೆಯನ್ನು ಪೂರೈಸಿ ಸಾಕಷ್ಟು ಸಾಕ್ಷ್ಯಾದಾರಗಳು ಲಭ್ಯವಿದ್ದರಿಂದ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ. ಸದರಿ ಪಿಎಂ ವರದಿ ಮತ್ತು ಐಎಂವಿ ವರದಿಯನ್ನು ನಿಪಿ 5 ಮತ್ತು 6 ಎಂದು

ಗುರುತಿಸಲಾಗಿದ್ದು ಸಾಕ್ಷಿಯ ಸಹಿಗಳನ್ನು ನಿಪಿ5(ಎ) ಮತ್ತು ನಿಪಿ6(ಎ) ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲುಃ ಆರೋಪಿ ಪರ ಶ್ರೀ ಸಿವಿಎಸ್ ವಕೀಲರಿಂದಃ</u>**

ಸ್ಥಳಕ್ಕೆ ಹೋದಾಗ ಸುಮಾರು 10 ರಿಂದ 15 ಜನರು ಸೇರಿದ್ದರು. ಬೆಳಿಗ್ಗೆ 8.30 ಗಂಟೆ ಸಮಯಕ್ಕೆ ಘಟನಾ ಸ್ಥಳಕ್ಕೆ ಹೋಗಿರುತ್ತೇನೆ. ಸ್ಥ.ಳಕ್ಕೆ ಹೋದಾಗ ಅಪಘಾತಕ್ಕೊಳಗಾದ ಎರಡೂ ವಾಹನಗಳು ಸ್ಥಳದಲ್ಲಿದ್ದವು. ಸದರಿ ರಸ್ತೆ ರಾಷ್ಟ್ರೀಯ ಹೆದ್ದಾರಿ ಎಂದರೆ ಸರಿ. ವಾಹನ ಸಂಚಾರಕ್ಕೆ ಪಕ್ಕದಲ್ಲಿ ದಾರಿ ಇರುವುದರಿಂದ ಅಡಚಣೆಯಾಗಿರುವುದಿಲ್ಲ, ಎರಡೂ ವಾಹನಗಳು ರಸ್ತೆಯಲ್ಲೇ ಇತ್ತು. ನಿಪಿ11ರ ದಾಖಲೆಯಲ್ಲಿ ವಾಹನಗಳು ರಸ್ತೆಯಿಂದ ಹೊರಗೆ ಇರುವುದಾಗಿ ತೋರಿಸಲಾಗಿದೆ ಎಂದರೆ ಸರಿಯಲ್ಲ. ರಸ್ತೆ 25 ಅಡಿ ಅಗಲದ ರಸ್ತೆ. ಸರ್ವೀಸ್ ರಸ್ತೆ 5-6 ಅಡಿ ಇರಬಹುದು. ನಿಪಿ 11 ಅನ್ನು ನಾನೇ ತಯಾರಿಸಿರುತ್ತೇನೆ. ಅಪಘಾತ ಸ್ಥಳದಿಂದ ಮುಬಾರಖ್ ಶಾಮೀದ್ ಗೆ 50 ಮೀಟರ್ ಕ್ಕಿಂತ ಹೆಚ್ಚು ಅಂತರ ಇರುತ್ತದೆ.

ದ್ವಿಚಕ್ರ ವಾಹನದ ಚಾಲಕನಿಗೆ ಚಾಲನಾ ಪರವಾನಗಿ ಇದ್ದ ಬಗ್ಗೆ ದಾಖಲೆ ಪಡೆದಿರುತ್ತೇನೆ. ದ್ವಿಚಕ್ರ ವಾಹನದ ಚಾಲಕನಿಗೆ ಚಾಲನಾ ಪರವಾನಗಿ ಇರಲಿಲ್ಲ, ಆ ಕಾರಣಕ್ಕೆ ಅದನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ದ್ವಿಚಕ್ರ ವಾಹನದ ಚಾಲಕನ ಅಜಾಗರೂಕತೆಯಿಂದ ಅಪಘಾತವಾಗಿದ್ದು, ಈ ಅಪಘಾತಕ್ಕೂ ಟ್ರಾಕ್ಟರ್ ಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ದ್ವಿಚಕ್ರ ವಾಹನದ ಚಾಲಕ ರಸ್ತೆಯ ವಿಭಜಕ್ಕೆ ಡಿಕ್ಕಿಪಡಿಸಿ ಅಪಘಾತ ಮಾಡಿದ್ದು, ಆತನಿಗೆ ವಿಮೆ ಪರಿಹಾರ ಸಿಗಲು ಸಹಾಯ ಮಾಡಲು ಸುಳ್ಳು ಪ್ರಕರಣ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ.

ನಿಪಿ 6 ರ ಐಎಂವಿ ವರದಿಯಲ್ಲಿ ಟ್ರಾಕ್ಟರ್–ಗೆ ಯಾವುದೇ ಜಖಂ ಆಗಿಲ್ಲ ಎಂದು ನಮೂದಿಸಲಾಗಿದೆ ಎಂದರೆ ಸರಿ. ಟ್ರಾಕ್ಟರ್ ನಿಂದ ಅಪಘಾತವಾಗದೇ ಇರುವುದರಿಂದ ಟ್ರಾಕ್ಟರ್ ಗೆ ಯಾವುದೇ ಜಖಂ ಆಗಿಲ್ಲ ಎಂದರೆ ಸರಿಯಲ್ಲ. ದಿಃ 07.10.2023 ರಂದು ಇಂಡೆಮಿನಿಟಿ ಬಾಂಡ್ ಪಡೆದಿರುತ್ತಾರೆ, ಸಾಕ್ಷಿ ಮುಂದುವರೆದು ಅದರಲ್ಲಿ ದಿನಾಂಕ ಕಣ್ ತಪ್ಪಿನಿಂದ ತಪ್ಪಾಗಿ ನಮೂದಾಗಿರುವುದಾಗಿ ನುಡಿದಿರುತ್ತಾರೆ. ಚಾಸಾ 2 ಮತ್ತು 10 ರವರ ಹೇಳಿಕೆಗಳನ್ನು ಪಡೆದಿಲ್ಲ ಎಂದರೆ ಸರಿಯಲ್ಲ, ಘಟನಾ ಸ್ಥಳಕ್ಕೆ ಬೇಟಿ ನೀಡಿಲ್ಲ , ಠಾಣೆಯಲ್ಲಿ ಮಹಜರ್ ಮತ್ತು ಕಚ್ಚಾ ನಕಾಶೆಯನ್ನು ತಯಾರಿಸಿರುತ್ತೇನೆ ಎಂದರೆ ಸರಿಯಲ್ಲ. ಚಾಸಾ 2 ರಿಂದ 4 ರವರು ಸ್ಥಳಕ್ಕೆ ಬೇಟಿ ನೀಡಿಲ್ಲ ಎಂದರೆ ಸರಿಯಲ್ಲ.

ಆರೋಪಿಯನ್ನು ನಮ್ಮ ಸಿಬ್ಬಂದಿಯವರು ಕರೆದುಕೊಂಡು ಬಂದಿರುತ್ತಾರೆ, ಎಲ್ಲಿಂದ ಕರೆದುಕೊಂಡು ಬಂದಿರುತ್ತಾರೆ ಎಂದು ನೆನಪಿಲ್ಲ. ಆರೋಪಿಯನ್ನು ದಸ್ತಗಿರಿ ಮಾಡಿರುವುದಿಲ್ಲ ನಮ್ಮ ಅಧಿಕಾರ ಬಳಸಿಕೊಂಡು ಆರೋಪಿಯ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಮೃತರ ದ್ವಿ ಚಕ್ರ ವಾಹನಕ್ಕೆ ಚಾಲನಾ ಪರವನಾಗಿ ಮತ್ತು ವಿಮೆ ಇರಲಿಲ್ಲ , ಚಾಸಾ 1 ರವರಿಗೆ ವಿಮೆ ಪರಿಹಾರ ಸಿಗಲು ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ. ಸ. ಇದೆ

ಸಹಿ/-
(ಶ್ರೀಮತಿ ರೋಹಿಣಿ. ಡಿ)
1 ನೇ ಅಪರ ಸಿ.ಜೆ ಮತ್ತು ಜೆಎಂಎಫ್ ಸಿ
ಮುಳಬಾಗಿಲು